Online Newspaper Clipping Service

THE HINDU

**Dated, Friday, 09th June– 2017** **Pg.No.04**

# HC poser to State on OCI category students

## 'When they can appear for NEET, why can't they be admitted to medical course in Karnataka?'

SPECIAL CORRESPONDENT
BENGALURU

When students belonging to the Overseas Citizens of India (OCI) category are permitted to take the National Eligibility-cum-Entrance Test (NEET) for admissions to undergraduate medical and dental courses why can't they be permitted to get admissions to these courses in Karnataka?

A Division Bench comprising Justice H.G. Ramesh and Justice John Michael Cunha, which was hearing petitions filed by Soundarya and seven other OCI category students, posed this question orally and asked the State government to spell out its stand by Friday on whether or not it would allow OCI students for admissions to these courses.



FROM THE COURT

The Bench posed the query when a counsel representing a student pointed out that neighbouring States such as Kerala and Telangana have already made provisions for admission of students belonging to OCI category who hail from the respective States. The Bench also noticed that the Union government itself had allowed OCI students to appear for NEET for the purpose of seeking admissions to undergraduate medical and dental courses.

Moreover, it has been contended on behalf of the petitioner students that the Karnataka Selection of Candidates for Admission to Government Seats in Professional Educational Institutions Rules, 2006, which allows admission to these courses under the government quota only for Indian citizens, is contrary to the amendments made to the Citizenship Act, giving certain benefits to the registered OCIs on parity with Non-Resident Indians.

The Ministry of External Affairs had specifically stated that the registered OCIs are entitled to appear for the All-India Pre-medical Test or such other tests to make them eligible for admission in pursuance of the provisions contained in the relevant Acts.

The petitioners are children of Indian citizen but were born abroad when their parents were employed in foreign countries.

ಪ್ರಜಾವಾಣಿ



## ಕಾಯ್ದೆ ತಿದ್ದುಪಡಿಗೆ ಪ್ರಸಕ್ತ ಅಧಿವೇಶನದಲ್ಲೇ ಮಸೂದೆ ಮಂಡನೆ

# ಸರ್ಕಾರಿ ಕೋಟಾದಡಿ ಸೀಟು ಪಡೆದ ವೈದ್ಯರಿಗೆ 'ಕಡ್ಡಾಯ ಗ್ರಾಮೀಣ ಸೇವೆ'

ಪ್ರಜಾವಾಣಿ ವಾರ್ತೆ

ಬೆಂಗಳೂರು: ಸರ್ಕಾರಿ ಕೋಟಾದಡಿ ಸೀಟು ಪಡೆದ ವೈದ್ಯಕೀಯ ವಿದ್ಯಾರ್ಥಿಗಳಿಗೆ ಒಂದು ವರ್ಷ 'ಕಡ್ಡಾಯ ಗ್ರಾಮೀಣ ಸೇವೆ' ಕಾಯ್ದೆ ಜಾರಿಗೆ ತರಲು ರಾಜ್ಯ ಸರ್ಕಾರ ನಿರ್ಧರಿಸಿದೆ.

ಈ ಉದ್ದೇಶದಿಂದ 'ಕರ್ನಾಟಕ ವೈದ್ಯಕೀಯ ಕೋರ್ಸ್‌ಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ ತರಬೇತಿ ಕಾಯ್ದೆ- 2012'ಕ್ಕೆ ತಿದ್ದುಪಡಿ ತರಲು ಸರ್ಕಾರ ಮುಂದಾಗಿದ್ದು, ಪ್ರಸಕ್ತ ಅಧಿವೇಶನದಲ್ಲಿ ಮಸೂದೆ ಮಂಡಿಸಲು ಸಿದ್ಧತೆ ನಡೆದಿದೆ.

ಈಗಾಗಲೇ ತಿದ್ದುಪಡಿ ಕಾಯ್ದೆಯಲ್ಲಿ ಇರಬೇಕಾದ ಅಂಶಗಳಿಗೆ ಅಂತಿಮ ರೂಪ ನೀಡಲಾಗಿದೆ. ಇದಕ್ಕೆ ಸಚಿವ ಸಂಪುಟವೂ ಒಪ್ಪಿಗೆ ನೀಡಿದೆ.

ವೈದ್ಯಕೀಯ ಪದವಿ ಕಲಿಕಾ ಅವಧಿ ಮತ್ತು ಪಠ್ಯಕ್ರಮವನ್ನು ಭಾರತೀಯ ವೈದ್ಯಕೀಯ ಮಂಡಳಿ (ಎಂಸಿಐ) ನಿರ್ಧರಿಸುತ್ತದೆ.

'ಕಡ್ಡಾಯ ಸೇವಾ ತರಬೇತಿ ಕಾಯ್ದೆ - 2012'ರ ಪ್ರಕಾರ ಒಂದು ವರ್ಷ ಕಡ್ಡಾಯ ಗ್ರಾಮೀಣ ಸೇವೆ ತರಬೇತಿ ಪಡೆಯಬೇಕೆಂಬ ಅಂಶ ಎಂಸಿಐ ಪಠ್ಯಕ್ರಮಕ್ಕೆ ಪೂರಕವಾಗಿಲ್ಲ. ಈ ಕಾರಣಕ್ಕೆ ಗೊಂದಲ ಮತ್ತು ವಿವಾದ ಸೃಷ್ಟಿಯಾಗುವುದನ್ನು ತಡೆಯಲು ಈ ಕಾಯ್ದೆ ತಿದ್ದುಪಡಿ ಮಾಡಲು ನಿರ್ಧರಿಸಲಾಗಿದೆ' ಎಂದೂ ವೈದ್ಯಕೀಯ ಶಿಕ್ಷಣ ಇಲಾಖೆ ಮೂಲಗಳು ತಿಳಿಸಿವೆ.

**ಮುಖ್ಯಾಂಶಗಳು**

- ಪ್ರಸಕ್ತ ಶೈಕ್ಷಣಿಕ ವರ್ಷದಿಂದ ನಿಯಮ ಜಾರಿ
- ಹಳ್ಳಿಗಳಲ್ಲಿ ವೈದ್ಯರ ಕೊರತೆ ನೀಗಿಸಲು ಕ್ರಮ
- ಕಾನೂನಾತ್ಮಕ ಸಮಸ್ಯೆ ತಪ್ಪಿಸಲು ತಿದ್ದುಪಡಿ

ಗ್ರಾಮೀಣ ಭಾಗದ ಸರ್ಕಾರಿ ಆಸ್ಪತ್ರೆಗಳಲ್ಲಿ ಸೇವೆ ಕಡ್ಡಾಯ ಮಾಡಿ ಸರ್ಕಾರ 2015ರಲ್ಲಿ ಆದೇಶ ಹೊರಡಿಸಿತ್ತು. ಅದರಂತೆ, 'ಒಂದು ವರ್ಷ ಕಡ್ಡಾಯವಾಗಿ ಗ್ರಾಮೀಣ ಸೇವೆ ಮಾಡುತ್ತೇವೆ' ಎಂದು ವಿದ್ಯಾರ್ಥಿಗಳು ಪ್ರಮಾಣ ಪತ್ರ ಸಲ್ಲಿಸಬೇಕಿತ್ತು. ಇಲ್ಲದಿದ್ದರೆ ಎಂಬಿಬಿಎಸ್ ಪದವಿ ಪ್ರಮಾಣ ಪತ್ರ ದೊರೆಯುವುದಿಲ್ಲ ಎಂದು ಕಾಯ್ದೆ ಮಾಡಲಾಗಿತ್ತು.

ಸರ್ಕಾರದ ಆದೇಶ ಪ್ರಶ್ನಿಸಿ ಕೆಲವು ಖಾಸಗಿ ಕಾಲೇಜುಗಳ ವಿದ್ಯಾರ್ಥಿಗಳು ಹೈಕೋರ್ಟ್ ಮೆಟ್ಟಿಲೇರಿದ್ದರು. ಅನಂತರ ಹೈಕೋರ್ಟ್ ಮಧ್ಯಂತರ ತಡೆಯಾಜ್ಞೆ ನೀಡಿತ್ತು.

ಈಗ ರಾಜ್ಯ ಸರ್ಕಾರ ಹೈಕೋರ್ಟ್‌ಗೆ ಪ್ರಮಾಣ ಪತ್ರ ಸಲ್ಲಿಸಿದ್ದು, 'ಸರ್ಕಾರಿ ಕೋಟಾದಡಿ ಕಲಿಯುವ ವಿದ್ಯಾರ್ಥಿಗಳಿಗೆ ಮಾತ್ರ ಗ್ರಾಮೀಣ ಸೇವೆ ಕಡ್ಡಾಯ' ಮಾಡಲು ಉದ್ದೇಶಿಸಿರುವುದಾಗಿ ತಿಳಿಸಿದೆ.

ತಿದ್ದುಪಡಿ ಕಾಯ್ದೆಯಲ್ಲಿ, ಮೂಲ ಕಾಯ್ದೆಯಲ್ಲಿರುವ ಸೆಕ್ಷನ್ 3(2), 4(2) ಮತ್ತು 5 (2) ಕೈಬಿಡಲು ತೀರ್ಮಾನಿಸಲಾಗಿದೆ. ಈ ಸೆಕ್ಷನ್‌ಗಳ ಪ್ರಕಾರ ಕಡ್ಡಾಯವಾಗಿ ಒಂದು ವರ್ಷ ಗ್ರಾಮೀಣ ಸೇವಾ ತರಬೇತಿ ಪಡೆಯದ ಅಭ್ಯರ್ಥಿಗಳಿಗೆ ಯಾವುದೇ ವಿಶ್ವವಿದ್ಯಾಲಯವು ವೈದ್ಯಕೀಯ, ಸ್ನಾತಕೋತ್ತರ ವೈದ್ಯಕೀಯ, ಸೂಪರ್ ಸ್ಪೆಷಾಲಿಟಿ ಪದವಿ, ಡಿಪ್ಲೊಮಾ ನೀಡಬಾರದು ಎಂದು ಷರತ್ತು ವಿಧಿಸಲಾಗಿತ್ತು. ಆದರೆ, ಮೂಲ ಕಾಯ್ದೆಯಲ್ಲಿರುವ ಈ ಅಂಶಗಳು ಎಂಸಿಐ ನಿಯಮಗಳಿಗೆ ವಿರುದ್ಧವಾಗಿದ್ದು, ಕಾನೂನಾತ್ಮಕ ಸಮಸ್ಯೆಗಳನ್ನು ಸೃಷ್ಟಿಸುವುದರಿಂದ ಈ ಅಂಶಗಳನ್ನು ಕೈಬಿಡಲು ತೀರ್ಮಾನಿಸಲಾಗಿದೆ.

ಪ್ರತಿಯೊಬ್ಬ ವೈದ್ಯಕೀಯ ವಿದ್ಯಾರ್ಥಿಗೆ ಸರ್ಕಾರ ಸುಮಾರು ₹ [illegible] ಲಕ್ಷ ವೆಚ್ಚ ಮಾಡುತ್ತಿದೆ. ಆದರೆ, ಈ ವಿದ್ಯಾರ್ಥಿಗಳು ರಾಜ್ಯದಲ್ಲಿ ಸೇವೆ ಸಲ್ಲಿಸಲು ಹಿಂಜರಿಯುತ್ತಾರೆ. ಇದರಿಂದಾಗಿ ಗ್ರಾಮೀಣ ಭಾಗದಲ್ಲಿರುವ ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯರ ಕೊರತೆ ಕಾಡುತ್ತಿದೆ. 2017ನೇ ಸಾಲಿನಲ್ಲಿ ಸುಮಾರು 3 ಸಾವಿರ ವಿದ್ಯಾರ್ಥಿಗಳು ಎಂಬಿಬಿಎಸ್, ಎಂ.ಡಿ ಪದವಿ ಪಡೆದಿದ್ದು, ಕೇವಲ 18 ವಿದ್ಯಾರ್ಥಿಗಳು ಮಾತ್ರ ಗ್ರಾಮೀಣ ಸೇವೆ ಆಯ್ಕೆ ಮಾಡಿಕೊಂಡಿದ್ದಾರೆ.

### ಗ್ರಾಮೀಣ ಸೇವೆಗೆ ವೈದ್ಯರು ಲಭ್ಯ

'ಸರ್ಕಾರಿ ಕೋಟಾದಡಿ ಪ್ರತಿ ವರ್ಷ ಮೂರು ಸಾವಿರ ವಿದ್ಯಾರ್ಥಿಗಳು ಎಂಬಿಬಿಎಸ್ ಪೂರ್ಣಗೊಳಿಸುತ್ತಾರೆ. ಸರ್ಕಾರದ ಸೌಲಭ್ಯ ಪಡೆದು ಕೋರ್ಸ್ ಮುಗಿಸುವ ಈ ವೈದ್ಯರನ್ನು ಗ್ರಾಮೀಣ ಸೇವೆಗೆ ಬಳಸಿಕೊಂಡು ವೈದ್ಯರ ಕೊರತೆ ನೀಗಿಸಲು ಉದ್ದೇಶಿಸಲಾಗಿದೆ. ಈ ಕಾರಣಕ್ಕೆ ತಿದ್ದುಪಡಿ ಮಾಡಲಾಗುತ್ತದೆ. ಪ್ರಸಕ್ತ ಶೈಕ್ಷಣಿಕ ವರ್ಷದಿಂದಲೇ ಈ ನಿಯಮ ಜಾರಿಗೆ ತರಲು ಉದ್ದೇಶಿಸಲಾಗಿದೆ' ಎಂದು ಮೂಲಗಳು ತಿಳಿಸಿವೆ.

ಕೋಲಾರಪತ್ರಿಕೆ



# ದೇವರಾಜ ಅರಸ್ ಕಾಲೇಜಿನಲ್ಲಿ ವಿಶ್ವ ಪರಿಸರ ದಿನ ಸಂಭ್ರಮ





ಕೋಲಾರ ಜೂ ೮ ಟಮಕದ ಶ್ರೀ ದೇವರಾಜ ಅರಸ್ ಉನ್ನತ ಶಿಕ್ಷಣ ಹಾಗೂ ಸಂಶೋಧನಾ ಸಂಸ್ಥೆಯ ರಾಷ್ಟ್ರೀಯ ಸೇವಾ ಯೋಜನಾ ಘಟಕದಿಂದ ವಿಶ್ವ ಪರಿಸರ ದಿನದ ಅಂಗವಾಗಿ ವಿವಿಧ ಕಾರ್ಯಕ್ರಮಗಳು ನಡೆದವು.

ಸಂಸ್ಥೆಯ ಕಾರ್ಯದರ್ಶಿ ಜಿ.ಎಚ್. ನಾಗರಾಜ, ಡಾ|| ರಾಜೇಶಎನ್.ಜಗದಾಳೆ, ಕುಲಾಧಿಪತಿ ಡಾ||ಎಸ್. ಕುಮಾರ್, ಕುಲಪತಿ ಡಾ||ಸಿ.ವಿ. ರಘುವೀರ್, ವೈದ್ಯಕೀಯ ಮಹಾವಿದ್ಯಾಲಯದ ಪ್ರಾಂಶುಪಾಲ ಡಾ|| ಹರೇಂದ್ರಕುಮಾರ ಮತ್ತು ವಿವಿದ ವಿಭಾಗಗಳ ಮುಖ್ಯಸ್ಥರು ಸಸಿಗಳನ್ನು ನೆಟ್ಟರು.

ಕುಲಾಧಿಪತಿ ಡಾ||ಎಸ್. ಕುಮಾರ್ ಎನ್ನೆಸ್ಸೆಸ್ ಸ್ವಯಂ ಸೇವಕರು ಮತ್ತು ವಿದ್ಯಾರ್ಥಿಗಳೊಂದಿಗೆ ಸಂವಾದನೆ ನಡೆಸಿ ಪರಿಸರದ ಸಂರಕ್ಷಣೆ ಹಾಗೂ ಪೋಷಣೆಗಾಗಿ ಸ್ವಲ್ಪ ಸಮಯ ಮೀಸಲಿಡಲು ಸಲಹೆಯಿತ್ತರು.

ನಂತರ ಆರ್.ಎಲ್. ಜಾಲಪ್ಪ ಶಾಲಾ ವಿದ್ಯಾರ್ಥಿಗಳು, ವೈದ್ಯಕೀಯ ಹಾಗೂ ಅರೆ ವೈದ್ಯಕೀಯ ಮಹಾವಿದ್ಯಾಲಯದ.ವಿದ್ಯಾರ್ಥಿಗಳು ಬೀಜ ದುಂಡೆ ತಯಾರಿ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ಎನ್ನೆಸ್ಸೆಸ್ ಸಂಯೋಜನಾಧಿಕಾರಿ ಡಾ|| ಕುಮಾರಸ್ವಾಮಿ, ಡಾ|| ಜಯಂತಿ ಕಾರ್ಯಕ್ರಮ ನಿರ್ವಹಿಸಿದರು.